ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ/2158/2021 ಬಹುಮಹಡಿಗಳ ಕಟ್ಟಡ,
ಪಿ.ಓ. ಎಆರ್‌ಇ-06 (ಮಂಡನಾಧಿಕಾರಿಗಳ ಶಾಖೆ). ಡಾ: ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:10/01/2022.

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3) ರ ಅನ್ವಯ ಶಿಫಾರಸ್ಸು ವರದಿ**

**ವಿಷಯ: ಶ್ರೀ. ಡಿ. ರಾಮಲಿಂಗಪ್ಪ ಬಿನ್ ಶ್ರೀ. ಶರಣಪ್ಪ, ಗ್ರಾಮ ಲೆಕ್ಕಾಧಿಕಾರಿ, ಪೂರತಿಪ್ಲಿ, ರಾಯಚೂರು, ರಾಯಚೂರು ಜಿಲ್ಲೆರವರು ದುರ್ನಡತೆ / ದುರ್ವರ್ತನೆ ತೋರಿದ ಬಗ್ಗೆ.**

*****

1. ರಾಯಚೂರು ಭ್ರಷ್ಟಾಚಾರ ನಿಗ್ರಹ ದಳ ಪೋಲಿಸ್ ಠಾಣೆಯ ಪೋಲಿಸ್ ನಿರೀಕ್ಷಕರು (ಇನ್ನು ಮುಂದೆ 'ತನಿಖಾಧಿಕಾರಿ' ಎಂದು ಕರೆಯಲ್ಪಡುತ್ತಾರೆ) ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸಿದ ವರದಿಯಲ್ಲಿ **ಶ್ರೀ. ಡಿ. ರಾಮಲಿಂಗಪ್ಪ ಬಿನ್ ಶ್ರೀ. ಶರಣಪ್ಪ, ಗ್ರಾಮ ಲೆಕ್ಕಾಧಿಕಾರಿ, ಪೂರತಿಪ್ಲಿ, ರಾಯಚೂರು, ರಾಯಚೂರು ಜಿಲ್ಲೆ,** (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ). **ಶ್ರೀ. ರಾಜಶೇಖರ ಬಿನ್ ಬಸಣ್ಣ ಅರೋಲಿ, ವಾಸ: ಜಾಗೀರ ವೆಂಕಟಾಪುರ, ರಾಯಚೂರು, ರಾಯಚೂರು ಜಿಲ್ಲೆ** (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಎದುರುದಾರರನ್ನು ಅವರ ಕೆಲಸದ ನಿಮಿತ್ತ ಭೇಟಿಮಾಡಿದಾಗ ಎದುರುದಾರರು ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 7(2)ರಡಿಯಲ್ಲಿ ತನಿಖೆ ಕೈಗೊಂಡಿದೆ.

2. **ಪ್ರಕರಣದ ಸಂಕ್ಷಿಪ್ತ ಸಾರಾಂಶ :-**

i) ದೂರುದಾರರಾದ **ಶ್ರೀ. ರಾಜಶೇಖರ ಬಿನ್ ಬಸಣ್ಣ ಅರೋಲಿ** ರವರಿಗೆ ಜಾಗೀರ ವೆಂಕಟಾಪುರ ಗ್ರಾಮದಲ್ಲಿ ಸರ್ವೆ ನಂ. 124/2 ರಲ್ಲಿ 6 ಎಕರೆ ಜಮೀನು ಇದ್ದು, ಸದರಿ ಜಮೀನಿನ ಒಟ್ಟು ವಿಸ್ತೀರ್ಣದಲ್ಲಿನ 3 ಎಕರೆ ಜಮೀನನ್ನು ದೂರುದಾರರ ಪತ್ನಿಯ ಹೆಸರಿಗೆ ಖಾತೆ ಮಾಡಲು ದಿ: 21/08/2018 ರಂದು ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿಯು ಎದುರುದಾರರ ಬಳಿ ಇದ್ದು, ದಿ: 23/08/2018 ರಂದು ದೂರುದಾರರು ಅವರ ಕೆಲಸದ ಬಗ್ಗೆ ಎದುರುದಾರರನ್ನು ವಿಚಾರಿಸಿದಾಗ ಎದುರುದಾರರು ಮರುದಿನ ಬರುವಂತೆ ತಿಳಿಸಿದ್ದು, ಅದರಂತೆ ದಿ: 24/08/2018 ರಂದು ದೂರುದಾರರು ಎದುರುದಾರರನ್ನು ಭೇಟಿಯಾದಾಗ ಎದುರುದಾರರು ಅವರಿಗೆ ಮೂಲ ಅರ್ಜಿ ಮತ್ತು ಇತರೆ ದಾಖಲೆಗಳನ್ನು ನೀಡಿ

ದೂರುದಾರರ ಹೆಂಡತಿಯವರ ಸಹಿ ಪಡೆದುಕೊಂಡು ಬರುವಂತೆ ತಿಳಿಸಿದ್ದು, ದಿ: 26/10/2018 ರಂದು ದೂರುದಾರರು ಅವರ ಮೊಬೈಲ್ ನಂ.9606639334 ರಿಂದ ಎದುರುದಾರರ ಮೊಬೈಲ್ ನಂ.9902347999 ಕಾಲ್ ಮಾಡಿ ಮಾತನಾಡಿದಾಗ ಎದುರುದಾರರು 6,000/- ರೂ. ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ಆಗ ದೂರುದಾರರು ಅಷ್ಟು ಆಗುವುದಿಲ್ಲವೆಂದು ತಿಳಿಸಿದಾಗ 5,000/- ರೂ. ಗೆ ಇಳಿಸಿ, ಲಂಚದ ಹಣಕ್ಕೆ ಬೇಡಿಕೆಯಿಟ್ಟಿದ್ದು, ಸದರಿ ಸಂಭಾಷಣೆಯನ್ನು ದೂರುದಾರರು ಮೊಬೈಲ್‌ನಲ್ಲಿ ಧ್ವನಿಮುದ್ರಿಸಿಕೊಂಡಿದ್ದು, ದೂರುದಾರರಿಗೆ ಲಂಚದ ಹಣಕೊಡಲು ಇಷ್ಟವಿಲ್ಲದ್ದರಿಂದ, ದೂರುದಾರರು ದಿ: 26/10/2018 ರಂದು ರಾಯಚೂರು ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಪೊಲೀಸ್ ಉಪಾಧೀಕ್ಷಕರಿಗೆ ದೂರನ್ನು ನೀಡಿದ್ದು, ಸದರಿ ಠಾಣೆಯ ಠಾಣಾಧಿಕಾರಿಗಳು ಅವರ ಠಾಣೆಯ ಗುನ್ನೆ ನಂ.12/2018 ರಲ್ಲಿ ಕಲಂ 7 (ಎ) ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988 (ತಿದ್ದುಪಡಿ ಕಾಯ್ದೆ 2018) ರಡಿಯಲ್ಲಿ ಎದುರುದಾರರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುತ್ತಾರೆ.

ii) ದಿನಾಂಕ 26/10/2018 ರಂದು ತನಿಖಾಧಿಕಾರಿಗಳು ಜಪ್ತಿ ಪೂರ್ವದ ಪಂಚನಾಮೆಯ ಸಮಯದಲ್ಲಿ ಇಬ್ಬರು ಪಂಚರನ್ನು ಠಾಣೆಗೆ ಕರೆಯಿಸಿ, ದೂರುದಾರರನ್ನು ಪರಿಚಯಿಸಿ, ಪಂಚರಿಗೆ ದೂರಿನ ಸಂಕ್ಷಿಪ್ತ ಮಾಹಿತಿಯನ್ನು ನೀಡಿದ ನಂತರ ಪಂಚಸಾಕ್ಷಿದಾರರು ಪಂಚರಾಗಿ ಸಹಕರಿಸಲು ಒಪ್ಪಿಕೊಂಡಿರುತ್ತಾರೆ. ದೂರುದಾರರು ಸಂಭಾಷಣೆಗಳನ್ನು ಧ್ವನಿಮುದ್ರಿಸಿಕೊಂಡಿದ್ದ ಮೊಬೈಲನ್ನು ತನಿಖಾಧಿಕಾರಿಯವರಿಗೆ ನೀಡಿದ್ದು, ಅವರು ಅದರಲ್ಲಿರುವ ಸಂಭಾಷಣೆಗಳನ್ನು ಲ್ಯಾಪ್‌ಟಾಪ್ ಮೂಲಕ ಎಲ್ಲರಿಗೂ ಕೇಳಿಸಿ, ಸದರಿ ಸಂಭಾಷಣೆಗಳನ್ನು ಪಂಚನಾಮೆಯಲ್ಲಿ ಲಿಪಿಕರಣಗೊಳಿಸಿ, ನಂತರ ಲ್ಯಾಪ್‌ಟಾಪ್ ಮೂಲಕ ಮೊಬೈಲ್‌ನಲ್ಲಿದ್ದ ಸಂಭಾಷಣೆಗಳನ್ನು ಸಿ.ಡಿ.ಗಳಿಗೆ ವರ್ಗಾಯಿಸಿ ಎರಡೂ ಸಿ.ಡಿ.ಗಳನ್ನು ವಶಕ್ಕೆ ಪಡೆದಿರುತ್ತಾರೆ. ತನಿಖಾಧಿಕಾರಿಯ ಮುಂದೆ ದೂರುದಾರರು 500/- ರೂ. ಮುಖಬೆಲೆಯ 10 ನೋಟುಗಳನ್ನು (ಒಟ್ಟು 5,000/- ರೂ.ಗಳು) ಹಾಜರುಪಡಿಸಿದ್ದು, ಪಂಚಸಾಕ್ಷಿದಾರರು ಆ ನೋಟುಗಳ ವಿವರಗಳನ್ನು ಪರಿಶೀಲಿಸಿ, ಹಾಳೆಯಲ್ಲಿ ನಮೂದಿಸಿಕೊಂಡಿರುತ್ತಾರೆ ನಂತರ ಸಿಬ್ಬಂದಿ ಪಂಚನಾಮೆಯಲ್ಲಿ ನಮೂದಿಸಿರುತ್ತಾರೆ. ಸದರಿ ನೋಟುಗಳಿಗೆ ತನಿಖಾಧಿಕಾರಿಯು ಸಿಬ್ಬಂದಿ ಮುಖಾಂತರ ಫಿನಾಪ್ತಲಿನ್ ಪುಡಿಯನ್ನು ಲೇಪಿಸಿ, ಆ ನೋಟುಗಳನ್ನು ಪಂಚಸಾಕ್ಷಿ-2ರವರ ಮುಖಾಂತರ ದೂರುದಾರರ ಅಂಗಿಯ (ಕಮೀಜ್) ಎದೆಭಾಗದ ಎಡಬದಿಯ ಜೇಬಿನಲ್ಲಿ ಇಟ್ಟಿರುತ್ತಾರೆ. ತನಿಖಾಧಿಕಾರಿಯು ಸೂಚನೆಗಳನ್ನು ದೂರುದಾರರಿಗೆ ನೀಡಿದ್ದು ಎದುರುದಾರರ ಬಳಿಹೋಗಿ ನಿಮ್ಮ ಕೆಲಸದ

ಬಗ್ಗೆವಿಚಾರಿಸಿ ಆಗ ಎದುರುದಾರರು ಲಂಚದ ಹಣ ಕೇಳಿದರೆ ನಿಮ್ಮಲ್ಲಿರುವ ಪುಡಿಲೇಪಿತ ನೋಟುಗಳನ್ನು ಎದುರುದಾರರ ಕೈಗೆ ಕೊಡುವಂತೆ ಅಥವಾ ಬೇರೆ ಯಾವುದೇ ಸ್ಥಳದಲ್ಲಿ ಇಟ್ಟುಹೋಗಲು ತಿಳಿಸಿದಾಗ ಮಾತ್ರ ಅವರು ಹೇಳಿದಂತೆ ಹಣವನ್ನು ಕೊಟ್ಟು, ನಂತರ ಅಲ್ಲಿಂದ ಹೊರಬಂದು ಟವಲನ್ನು ತಲೆಗೆ ಸುತ್ತಿಕೊಳ್ಳುವ ಮೂಲಕ ಸೂಚನೆ ನೀಡಲು ತಿಳಿಸಿದ್ದಲ್ಲದೆ, ನೆರಳುಸಾಕ್ಷಿದಾರರಿಗೆ ದೂರುದಾರರ ಜೊತೆ ಹೋಗಿ ಅಲ್ಲಿ ನಡೆಯುವ ವಿದ್ಯಮಾನಗಳನ್ನು ಗಮನಿಸುವಂತೆ ತಿಳಿಸಿರುತ್ತಾರೆ. ಹಾಗೂ ಧ್ವನಿಮುದ್ರಕವನ್ನು ನೀಡಿ ಎದುರುದಾರರ ಬಳಿ ಹೋಗುವಾಗ ಚಾಲನಾ ಸ್ಥಿತಿಯಲ್ಲಿಟ್ಟುಕೊಳ್ಳುವಂತೆ ತಿಳಿಸಿರುತ್ತಾರೆ. ಎಲ್ಲಾ ಔಚಿತ್ಯಪೂರ್ವ ನಡವಳಿಕೆಗಳನ್ನು ದೂರುದಾರರು, ನೆರಳುಸಾಕ್ಷಿ, ಹಾಗೂ ಪಂಚರ ಸಮಕ್ಷಮ ನಿರ್ವಹಿಸಿರುತ್ತಾರೆ.

iii) ದಿನಾಂಕ 26/10/2018ರಂದು ದೂರುದಾರರು, ನೆರಳು ಮತ್ತು ಪಂಚಸಾಕ್ಷಿ ಹಾಗೂ ಸಿಬ್ಬಂದಿಗಳೊಂದಿಗೆ ತನಿಖಾಧಿಕಾರಿಯು ಎದುರುದಾರರ ಕಚೇರಿಯ ಹತ್ತಿರ ಬಂದಿರುತ್ತಾರೆ. ಅದೇ ದಿನ ಸಂಜೆ ಸುಮಾರು 4.30 ಗಂಟೆಗೆ ನೆರಳುಸಾಕ್ಷಿಯೊಂದಿಗೆ ದೂರುದಾರರು ಎದುರುದಾರರ ಕಚೇರಿಗೆ ಹೋಗಿ, ಅವರ ಕೆಲಸವಾದ ಹೊಲದ ಮ್ಯುಟೇಷನ್ ಬಗ್ಗೆ ವಿಚಾರಿಸಿದಾಗ ಎದುರುದಾರರು ಬೇಡಿಕೆ ಇಟ್ಟ ಹಣವನ್ನು ಕೇಳಿದ್ದು, ಆಗ ದೂರುದಾರರು ಆ ಹಣವನ್ನು ನೀಡಿದಾಗ ಎದುರುದಾರರು ಹಣವನ್ನು ಪಡೆದು ಎರಡೂ ಕೈಗಳಿಂದ ಎಣಿಸಿ ಎದುರುದಾರರು ಅವರ ಪ್ಯಾಂಟಿನ ಎಡಗಡೆಯ ಸೈಡ್‌ಜೇಬಿನಲ್ಲಿ ಇಟ್ಟುಕೊಂಡಿದ್ದು, ನಂತರ ದೂರುದಾರರು ಅವರ ಟವಲ್‌ನ್ನು ತಲೆಗೆ ಸುತ್ತಿಕೊಳ್ಳುವ ಮೂಲಕ ಸನ್ನೆ ಮಾಡಿದ್ದು, ಆಗ ತನಿಖಾಧಿಕಾರಿಗಳು, ಪಂಚಸಾಕ್ಷಿ ಮತ್ತು ಸಿಬ್ಬಂದಿಗಳೊಂದಿಗೆ ಎದುರುದಾರರ ಕಚೇರಿಗೆ ಧಾವಿಸಿ ದೂರುದಾರರು ತೋರಿಸಿದ ಎದುರುದಾರರನ್ನು ವಶಕ್ಕೆ ಪಡೆದು ತನಿಖೆಗೆ ಸಹಕರಿಸುವಂತೆ ತಿಳಿಸಿರುತ್ತಾರೆ. ನಂತರ ತನಿಖಾಧಿಕಾರಿಯವರು ಸಿಬ್ಬಂದಿಗಳ ಮುಖಾಂತರ ಸೋಡಿಯಂ ಕಾರ್ಬೋನೇಟ್ ದ್ರಾವಣವನ್ನು ತಯಾರಿಸಿ, ಆ ದ್ರಾವಣವನ್ನು ಎರಡು ಬಟ್ಟಲುಗಳಲ್ಲಿ ತೆಗೆದುಕೊಂಡು, ಒಂದು ಬಟ್ಟಲಿನ ದ್ರಾವಣದಲ್ಲಿ ಎದುರುದಾರರ ಬಲಗೈ ಬೆರಳುಗಳನ್ನು ಅದ್ದಿಸಿ ತೊಳೆದಾಗ, ಆ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿದ್ದು, ಇನ್ನೊಂದು ಬಟ್ಟಲಿನ ದ್ರಾವಣದಲ್ಲಿ ಎದುರುದಾರರ ಎಡಗೈ ಬೆರಳುಗಳನ್ನು ಅದ್ದಿಸಿ ತೊಳೆದಾಗ, ಆ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿದ್ದು, ಆ ದ್ರಾವಣಗಳನ್ನು ಪ್ರತ್ಯೇಕವಾಗಿ ತನಿಖಾಧಿಕಾರಿಯವರು ಬಾಟಲುಗಳಲ್ಲಿ ವಶಕ್ಕೆ ಪಡೆದಿರುತ್ತಾರೆ. ನಂತರ ತನಿಖಾಧಿಕಾರಿಯವರು ದೂರುದಾರರಿಂದ ಪಡೆದ ಹಣದ ಬಗ್ಗೆ ಎದುರುದಾರರನ್ನು ವಿಚಾರಿಸಿದಾಗ, ಎದುರುದಾರರು ಅವರ ಜೀನ್ಸ್ ಪ್ಯಾಂಟಿನ ಎಡಗಡೆಯ ಸೈಡ್‌ಜೇಬಿನಲ್ಲಿ ಇಟ್ಟುಕೊಂಡಿರುವುದಾಗಿ ತಿಳಿಸಿ ಪುಡಿಲೇಪಿತ ಹಣವನ್ನು ಹಾಜರುಪಡಿಸಿದ್ದು,

ತನಿಖಾಧಿಕಾರಿಯವರು ಸದರಿ ಹಣವನ್ನು ಪಂಚಸಾಕ್ಷಿದಾರರ ಕೈಗೆ ನೀಡಿ ವಿವರಗಳನ್ನು ಪರಿಶೀಲಿಸುವಂತೆ ತಿಳಿಸಿದ್ದು, ಆ ನೋಟುಗಳ ವಿವರಗಳನ್ನು ಪಂಚಸಾಕ್ಷಿದಾರರು ಪರಿಶೀಲಿಸಿ ನೋಡಲಾಗಿ, ಆ ನೋಟುಗಳ ವಿವರಗಳು ಹಾಳೆಯಲ್ಲಿ ಮತ್ತು ಪ್ರಾಯೋಗಿಕ ಪಂಚನಾಮೆಯಲ್ಲಿ ನಮೂದು ಮಾಡಿದ ನೋಟುಗಳ ವಿವರಗಳಿಗೆ ತಾಳೆಯಾಗಿದ್ದುದರಿಂದ, ಆ ನೋಟುಗಳನ್ನು ತನಿಖಾಧಿಕಾರಿಯವರು ವಶಕ್ಕೆ ಪಡೆದಿರುತ್ತಾರೆ. ನಂತರ ತನಿಖಾಧಿಕಾರಿಯವರು ಎದುರುದಾರರಿಗೆ ಬೇರೊಂದು ಪ್ಯಾಂಟಿನ ವ್ಯವಸ್ಥೆಮಾಡಿ, ಎದುರುದಾರರು ಧರಿಸಿದ್ದ ಪ್ಯಾಂಟಿನಲ್ಲಿ ಹಣ ಇಟ್ಟುಕೊಂಡಿದ್ದ ಎಡಜೇಬನ್ನು ಗುರುತುಮಾಡಿ, ಆ ಪ್ಯಾಂಟನ್ನು ವಶಕ್ಕೆ ಪಡೆದಿರುತ್ತಾರೆ.

iv) ತನಿಖಾಧಿಕಾರಿಯು ಎದುರುದಾರರಿಗೆ ಸಮಜಾಯಿಷಿಯನ್ನು ಬರೆದುಕೊಡುವಂತೆ ತಿಳಿಸಿದಾಗ ಎದುರುದಾರರು ಸಮಜಾಯಿಷಿಯನ್ನು ಬರೆದುಕೊಟ್ಟಿದ್ದು, ಅದರಲ್ಲಿ ಯಾವುದೇ ಹಣಕ್ಕೆ ಬೇಡಿಕೆ ಇಟ್ಟಿರುವುದಿಲ್ಲ ದೂರುದಾರರು ಒತ್ತಾಯದಿಂದ ನೀಡಿರುತ್ತಾರೆ ಎಂದು ಸಮಜಾಯಿಷಿಯನ್ನು ಬರೆದು ಕೊಟ್ಟಿರುತ್ತಾರೆ. ಸದರಿ ಸಮಜಾಯಿಷಿಯನ್ನು ದೂರುದಾರರು ಮತ್ತು ನೆರಳುಸಾಕ್ಷಿ ಅಲ್ಲಗಳೆದಿರುತ್ತಾರೆ. ಎದುರುದಾರರ ಸಮಜಾಯಿಷಿಯು ತೃಪ್ತಿದಾಯಕವಾಗಿರುವುದಿಲ್ಲವೆಂದು ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆಯನ್ನು ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ. ಅದೇ ದಿನ ಪಂಚರ ಸಮಕ್ಷಮ ತನಿಖಾಧಿಕಾರಿಯು ಎದುರುದಾರರ ಮಾದರಿಧ್ವನಿಯ ಸಂಭಾಷಣೆಯನ್ನು ಪಂಚನಾಮೆ ಮಾಡುವ ಮೂಲಕ ಪಡೆದುಕೊಂಡಿರುತ್ತಾರೆ. ಆ ಸಮಯದಲ್ಲಿ ಎದುರುದಾರರ ಕಚೇರಿಯ ಕಂದಾಯ ನಿರೀಕ್ಷಕರಾದ ಶ್ರೀ. ಅಬ್ದುಲ್ ಸೋಹೆಲ್‌ರವರಿಗೆ ತನಿಖಾಧಿಕಾರಿಯು ಪ್ರಾಯೋಗಿಕಾ ಪಂಚನಾಮೆಯ ಸಮಯದಲ್ಲಿ ಪಡೆದ ಸಿ.ಡಿ.ಯನ್ನು ಕೇಳಿಸಿದಾಗ, ಅವರು ಎದುರುದಾರರ ಧ್ವನಿಯನ್ನು ಗುರುತಿಸಿರುತ್ತಾರೆ. ನಂತರ, ಎಲ್ಲರ ಸಮಕ್ಷಮ ಜಪ್ತಿ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ. ಧ್ವನಿ ಪರೀಕ್ಷಾ ವರದಿಯಲ್ಲಿ ಎದುರುದಾರರ ಧ್ವನಿಯು ತಾಳೆಯಾಗಿರುವುದಾಗಿ ಕಂಡು ಬಂದಿರುತ್ತದೆ ಮತ್ತು ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ಎದುರುದಾರರಿಂದ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೆ ಮಾಲುಗಳಲ್ಲಿ ಫಿನಾಪ್ತಲೀನ್ ಅಂಶ ಇರುವುದು ಕಂಡುಬಂದಿರುತ್ತದೆ. ಆ ಕಾರಣ, ಎದುರುದಾರರು ನೀಡಿದ ಸಮಜಾಯಿಷಿಯು ತೃಪ್ತಿದಾಯಕವಾಗಿರುವುದಿಲ್ಲ. ತನಿಖಾಧಿಕಾರಿಯು ಸಾಕ್ಷಿದಾರರ ಹೇಳಿಕೆ, ತನಿಖಾ ದಾಖಲೆಗಳನ್ನು ಮತ್ತು ತಜ್ಞರ ವರದಿಯನ್ನು ಹಾಗೂ ಅಭಿಯೋಜನಾ ಮಂಜುರಾತಿಯನ್ನು ಪಡೆದು ಎದುರುದಾರರ ವಿರುದ್ಧ ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತಾರೆ.

3. ಎದುರುದಾರರಿಂದ ಪರಿವೀಕ್ಷಣಾ ಟಿಪ್ಪಣಿಗೆ ಸಮಜಾಯಿಷಿ ಕೇಳಲಾಗಿತ್ತು. ಎದುರುದಾರರು ದಿ: 07/10/2021ರಂದು ಪರಿವೀಕ್ಷಣಾ ಟಿಪ್ಪಣಿಗೆ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯಲ್ಲಿ ಪರಿವೀಕ್ಷಣಾ ಟಿಪ್ಪಣಿಯ ಎಲ್ಲಾ ಅಂಶಗಳನ್ನು ಅಲ್ಲಗಳೆದಿರುತ್ತಾರೆ ಮತ್ತು ಅವರ ಸಮಜಾಯಿಷಿಯಲ್ಲಿ ತನಿಖಾಧಿಕಾರಿಗಳು ಸುಳ್ಳು ಪ್ರಕರಣದಲ್ಲಿ ತನ್ನನ್ನು ಸಿಕ್ಕಿ ಹಾಕಿಸುವ ಉದ್ದೇಶದಿಂದ ದಾಖಲೆಗಳನ್ನು ತಯಾರಿಸಿರುತ್ತಾರೆ ಎಂದು ಮತ್ತು ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳನ್ನು ಉಲ್ಲಂಘಿಸಿರುವುದಿಲ್ಲವೆಂದು ಮತ್ತು ಯಾವುದೇ ಶಿಸ್ತುಕ್ರಮ ಜರುಗಿಸಬಾರದೆಂದು ಕೋರಿರುತ್ತಾರೆ. ಎದುರುದಾರರು ನೀಡಿದ ಸಮಜಾಯಿಷಿಯು ಸಮರ್ಪಕವಾಗಿರುವುದಿಲ್ಲ. ಕಾರಣ ಧ್ವನಿ ಪರೀಕ್ಷಾ ವರದಿಯಲ್ಲಿ ಎದುರುದಾರರ ಧ್ವನಿಯು ತಾಳೆಯಾಗಿರುವುದಾಗಿ ಮತ್ತು ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ಎದುರುದಾರರಿಂದ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೆ ಮಾಲುಗಳಲ್ಲಿ ಫಿನಾಪ್ತಲೀನ್ ಅಂಶ ಇರುವುದು ಕಂಡುಬಂದಿರುತ್ತದೆ. ಈ ಎಲ್ಲಾ ಕಾರಣಗಳಿಂದ ಎದುರುದಾರರ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳಾಗಿ ಕಂಡು ಬರುವುದಿಲ್ಲ.

4. ದೂರು ಅರ್ಜಿ, ಸಾಕ್ಷಿದಾರರ ಹೇಳಿಕೆಗಳು, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆಗಳು, ರಾಸಾಯನಿಕ ತಜ್ಞರ ಪರೀಕ್ಷಾವರದಿ ಹಾಗೂ ದೋಷಾರೋಪಣ ಪತ್ರದಲ್ಲಿರುವ ಮಾಹಿತಿಗಳಿಂದ ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಎದುರುದಾರರ ವಿರುದ್ಧ ನಡೆವಳಿಯನ್ನು ಕೈಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

5. ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 2 (12) ರ ಪ್ರಕಾರ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿದ್ದು, ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯದಲ್ಲಿ ನಿಷ್ಠೆ ತೋರಿಸದೆ ಭ್ರಷ್ಟಾಚಾರವೆಸಗಿ ಕ.ನಾ.ಸೇ. (ನಡತೆ) ನಿಯಮಗಳು 1966 ನಿಯಮ 3 (1)(i) ರಿಂದ (iii) (ಪ್ರಸ್ತುತ ಕ.ನಾ.ಸೇ. (ನಡತೆ) ನಿಯಮಗಳು 2021 ನಿಯಮ (i) ರಿಂದ (iv)) ರನ್ವಯ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಎದುರುದಾರರ ವಿರುದ್ಧ ಇಲಾಖಾ ವಿಚಾರಣಾ ಮಾಡಲು ಕರ್ನಾಟಕ ನಾಗರಿಕ ಸೇವಾ -(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14(ಎ)ರಡಿ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯಿದೆ 12(3) ರಡಿ ಪ್ರದತ್ತವಾದ ಅಧಿಕಾರದಡಿ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

6. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು

ನಂ. ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ/2158/2021
ಪಿ.ಪಿ. ಎಆರ್‌ಇ-06 (ಮಂಡ[illegible]ಕಾರಿಗಳ ಶಾಖೆ)

ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ, ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

13/1/22

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ, ಬೆಂಗಳೂರು.